# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
# Bangalore Development Authority

ಸಂಖ್ಯೆ :
No. ಬೆಂಅಪ್ರಾ/ನಮ/ಅಸ/ಅಅ-2/ತಾಸ-3/ಉ/ 23 /2025-26

ದಿನಾಂಕ :
Date : 15.10.2025

ಬೆಂಗಳೂರು
ಅನುಸೂಚಿ–ಎ 5
(ಉಪವಿಧಿ ಸಂಖ್ಯೆ: 4.1)

ಆಯುಕ್ತರವರ ಕಛೇರಿ,
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ,
ಬೆಂಗಳೂರು.

## ನಕ್ಷೆ ಮಂಜೂರಾತಿ ಪತ್ರ

ಇವರಿಗೆ,

M/s Vajram Estates Private Limited,
Vajram group, Vajram Esteva,
2nd floor, Marathahalli - Sarjapura
Outer Ring Road, Devarabeesanahalli,
Bellandur, Bengaluru - 560 103.

ಮಾನ್ಯರೆ,

ಬೆಂಗಳೂರು ನಗರ ಜಿಲ್ಲೆ, ಯಲಹಂಕ ತಾಲ್ಲೂಕು, ಅವಲಹಳ್ಳಿ ಗ್ರಾಮದ ಸರ್ವೆ ನಂ. 104 ರಲ್ಲಿ ನಿರ್ಮಿಸಲು ಉದ್ದೇಶಿಸಿರುವ ನಾಲ್ಕು ಟವರ್ ವುಳ್ಳ (Tower-A, B, C & D) ತಳ+ನೆಲ+04ಮೇಲಂತಸ್ತು+ ಟೆರೇಸ್ ಅಂತಸ್ತುವುಳ್ಳ, ಒಟ್ಟು 115 ವಸತಿ ಘಟಕಗಳನ್ನೊಳಗೊಂಡ ಬಹುಮಹಡಿ ವಸತಿ ಸಮುಚ್ಚಯ ಕಟ್ಟಡಗಳು ಮತ್ತು ನೆಲ+03ಮೇಲಂತಸ್ತುವುಳ್ಳ ಅಮಿನಿಟಿ ಕಟ್ಟಡಕ್ಕೆ ಪ್ರಾಧಿಕಾರಕ್ಕೆ ಮನವಿ ಸಲ್ಲಿಸಿ ನಕ್ಷೆ ಮಂಜೂರಾತಿ ನೀಡಲು ಕೋರಿರುತ್ತೀರಿ. ಈ ಸಂಬಂಧ ಮಾನ್ಯ ಅಭಿಯಂತರ ಸದಸ್ಯರವರು ಸಂಖ್ಯೆ: 758, ದಿನಾಂಕ: 03.10.2025 ರಂದು ನಕ್ಷೆ ಮಂಜೂರಾತಿ ನೀಡಲು ಅನುಮೋದನೆ ನೀಡಿದ್ದು, ಅದರಂತೆ, ಚಲನ್ ನಂ. GN25105217, ದಿನಾಂಕ: 08.10.2025 ರಂದು ಒಟ್ಟು ರೂ. 1,22,86,152.00/- ಗಳನ್ನು ಪ್ರಾಧಿಕಾರಕ್ಕೆ ಪಾವತಿಸಿರುತ್ತೀರಿ. ಅದರಂತೆ, ಈ ಕೆಳಕಂಡ ಷರತ್ತುಗಳನ್ನು ವಿಧಿಸಿ ನಕ್ಷೆ ಮಂಜೂರಾತಿ ನೀಡಿದ್ದು, ಸದರಿ ಮಂಜೂರಾತಿಯು ದಿನಾಂಕ: 15.10.2025 ರಿಂದ 14.10.2027 ವರೆಗೆ ಎರಡು ವರ್ಷಗಳ ಅವಧಿಗೆ ಮಾತ್ರ ಮಾನ್ಯತೆ ಪಡೆದಿರುತ್ತದೆ ಎಂದು ಈ ಮೂಲಕ ನಾನು ತಿಳಿಯಪಡಿಸಿದ್ದೇನೆ.

### ಪಾಲಿಸಬೇಕಾದ ಷರತ್ತುಗಳು

1) ವಸತಿ ಉದ್ದೇಶದ ಏಕನಿವೇಶನ ವಿನ್ಯಾಸ ಅನುಮೋದನೆ ಸಂಖ್ಯೆ: ಬೆಂಅಪ್ರಾ/ನಯೋಸ/PRL-403/24-25/844/2025-26, ದಿನಾಂಕ: 26.05.2025 ಸಮಯದಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ತಪ್ಪದೇ ಪಾಲಿಸುವುದು.
2) ಮಾನ್ಯ ಸರ್ವೋಚ್ಚ ನ್ಯಾಯಾಲಯದ WP (Civil) No: 14664/2024, ದಿನಾಂಕ: 17.12.2024 ರಲ್ಲಿ ನೀಡಿರುವ ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸುವುದು.
3) ಜಿಲ್ಲಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ ರವರು ಸಂಖ್ಯೆ: 4978817, ದಿನಾಂಕ: 22.06.2023 ರಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸುವುದು.

P.T.O...

ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು.

4) Ministry of Environment, Forest and Climate Change (MOEF) ರವರಿಂದ ಪಡೆದಿರುವ ನಿರಾಕ್ಷೇಪಣಾ ಪತ್ರ ಸಂಖ್ಯೆ: SEIAA 29 CON 2025, ದಿನಾಂಕ: 02.04.2025 ಸಮಯದಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ತಪ್ಪದೇ ಪಾಲಿಸುವುದು.

5) KSPCB ಸಂಸ್ಥೆಯಿಂದ ಪಡೆದಿರುವ CFE ಪತ್ರ ಸಂಖ್ಯೆ: PCB ID: 249441, ದಿನಾಂಕ: 19.02.2025 ಸಮಯದಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ತಪ್ಪದೇ ಪಾಲಿಸುವುದು.

6) BESCOM ಸಂಸ್ಥೆಯಿಂದ ಪಡೆದಿರುವ ನಿರಾಕ್ಷೇಪಣಾ ಪತ್ರ ಸಂಖ್ಯೆ: SEE/BCN/EE(O)/ AEE(O)/2025-26/746-98, ದಿನಾಂಕ: 29.04.2025 ಸಮಯದಲ್ಲಿ ವಿಧಿಸಿರುವ ಎಲ್ಲಾ ಷರತ್ತುಗಳನ್ನು ತಪ್ಪದೇ ಪಾಲಿಸುವುದು.

7) ಮಳೆ ನೀರು ಕೊಯ್ಲನ್ನು ಕಡ್ಡಾಯವಾಗಿ ಅಳವಡಿಸುವುದು.

8) ಇಬ್ಬಗೆಯ ಕೊಳವೆ ವಿಧಾನವನ್ನು ಕುಡಿಯುವ ನೀರಿಗಾಗಿ ಹಾಗೂ ಇತರೆ ಉದ್ದೇಶಿತ ವ್ಯವಸ್ಥೆಗಳಿಗಾಗಿ ಅಳವಡಿಸುವುದು.

9) ಅಭಿವೃದ್ಧಿದಾರರು ಕಟ್ಟಡಗಳಿಗೆ ನಿಯಮಾನುಸಾರ ಸೋಲಾರ್ ಉಪಕರಣಗಳನ್ನು ಅಳವಡಿಸಿಕೊಳ್ಳತಕ್ಕದ್ದು.

10) ಒಳಚರಂಡಿ ವ್ಯವಸ್ಥೆಗಾಗಿ ಸ್ಥಾಪಿಸಿದ ನೈರ್ಮಲ್ಯ ಶುದ್ಧೀಕರಣ ಘಟಕವನ್ನು (S.T.P) ಅಳವಡಿಸಿ ಹಾಗೂ ಶುದ್ಧೀಕರಿಸಿದ ನೀರನ್ನು ಮನೆಗಳಲ್ಲಿನ ಶೌಚಾಲಯ, Gardening ಹಾಗೂ ಗಿಡಮರ Lawn ಗಳಿಗಾಗಿ ಕಡ್ಡಾಯವಾಗಿ ಉಪಯೋಗಿಸತಕ್ಕದ್ದು ಮತ್ತು ಇದರಿಂದ ಉತ್ಪತ್ತಿಯಾಗುವ Sewage ಯುಕ್ತ ತ್ಯಾಜ್ಯ ನೀರನ್ನು ಯಾವುದೇ ಕಾರಣಕ್ಕೂ ಕೆರೆ/ಹಳ್ಳ/ಕಣಿವೆ/ಹೊಳೆಗೆ ಬಿಡತಕ್ಕದಲ್ಲ.

11) ಯೋಜನೆಯಲ್ಲಿ ಘನ ತ್ಯಾಜ್ಯಗಳನ್ನು ಪ್ಲಾಸ್ಟಿಕ್ ಹಾಗೂ ಇತ್ಯಾದಿಯಾಗಿ ವಿಂಗಡಿಸಿ Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು ಹಾಗೂ ನಿಗಧಿತ ಸ್ಥಳಕ್ಕೆ ಸಾಗಿಸಲು ಸೂಕ್ತ ವ್ಯವಸ್ಥೆಯನ್ನು ಕಡ್ಡಾಯವಾಗಿ ಮಾಡಿಕೊಳ್ಳತಕ್ಕದ್ದು.

12) ನಕ್ಷೆಯಲ್ಲಿ ವಿವಿಧ ಉದ್ದೇಶಕ್ಕಾಗಿ ಗುರುತಿಸಿರುವ ಪ್ರದೇಶಗಳನ್ನು ಬೇರೆ ಯಾವುದೇ ಉದ್ದೇಶಕ್ಕೆ ಉಪಯೋಗಿಸತಕ್ಕದಲ್ಲ.

13) ಅಭಿವೃದ್ಧಿದಾರರು ಕಟ್ಟಡದ ಕಾಮಗಾರಿ ಪ್ರಾರಂಭಿಸುವ ಮುನ್ನ ಸದರಿ ಕಟ್ಟಡಗಳಲ್ಲಿ ಕೆಲಸ ನಿರ್ವಹಿಸುವ ಕಾರ್ಮಿಕರುಗಳಿಗೆ ಶೌಚಾಲಯಗಳನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು ಹಾಗೂ ಸದರಿ ಸೂಚನೆಯನ್ನು ಕಟ್ಟುನಿಟ್ಟಾಗಿ ಪಾಲಿಸುವುದು.

14) ಅಭಿವೃದ್ಧಿದಾರರು ಭದ್ರತಾ ಸಿಬ್ಬಂದಿಯವರನ್ನು ನೇಮಿಸಿ ಕಟ್ಟಡ ನಿರ್ಮಾಣದ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ವಾಹನ ಸಂಚಾರ ವ್ಯವಸ್ಥೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸಿ ಸಾರ್ವಜನಿಕರಿಗೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗದಂತೆ ನೋಡಿಕೊಳ್ಳತಕ್ಕದ್ದು, ಹಾಗೂ ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ಥೆಯನ್ನು ಸ್ವತ್ತಿನ ಒಳಭಾಗದಲ್ಲಿ ಅಳವಡಿಸಿ ನಿರ್ವಹಿಸುವುದು.

15) ಅರ್ಜಿದಾರರು ಶಾಸನಬದ್ಧ ಸಂಸ್ಥೆಗಳಿಂದ ಬಿಡಿಎ / ಬಿಬಿಎಂಪಿ / ನಗರ ಸಭೆ / ಪಂಚಾಯತ್ ಗೆ ಯಾವುದಾದರೂ ಬಾಕಿ ಶುಲ್ಕಗಳನ್ನು ಪಾವತಿಸಬೇಕಿದ್ದಲ್ಲಿ ಅಂತಹ ಸಂಸ್ಥೆಗಳು ವಿಧಿಸುವ ಶುಲ್ಕವನ್ನು ಪಾವತಿಸತಕ್ಕದ್ದು.

16) ಪ್ರಾಧಿಕಾರದಿಂದ ಮಂಜೂರಾದ ನಕ್ಷೆಯ ಪ್ರತಿಯನ್ನು ಕಟ್ಟಡ ನಿರ್ಮಾಣ ಮಾಡುವ ಸ್ಥಳದಲ್ಲಿ ಕಡ್ಡಾಯವಾಗಿ ಪ್ರದರ್ಶಿಸತಕ್ಕದ್ದು.

17) ಅಭಿವೃದ್ಧಿದಾರರು ಕಟ್ಟಡದ ಸುರಕ್ಷತೆ ಹಾಗೂ ಭದ್ರತೆಯು, ಕಟ್ಟಡದ ರಚನಾತ್ಮಕ ವಿನ್ಯಾಸದ ಬಗ್ಗೆ ಸಂಪೂರ್ಣವಾಗಿ ಜವಾಬ್ದಾರರಾಗಿರತಕ್ಕದ್ದು. ಈ ಸಂಬಂಧ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಯಾವುದೇ ರೀತಿಯ ಹೊಣೆಗಾರಿಕೆ ಮತ್ತು ಜವಾಬ್ದಾರಿಯನ್ನು ಹೊಂದಿರುವುದಿಲ್ಲ.

18) ಕಟ್ಟಡ ನಿರ್ಮಾಣ ಸಮಯದಲ್ಲಿ ಸೆಂಟರಿಂಗ್ ಅಥವಾ ಇನ್ನಿತರೇ ಕಾರಣಗಳಿಂದ ಏನಾದರೂ ಅನಾಹುತ ಸಂಭವಿಸಿದ್ದಲ್ಲಿ ಅದಕ್ಕೆ ಅಭಿವೃದ್ಧಿದಾರರೇ ಜವಾಬ್ದಾರರಾಗಿರುತ್ತಾರೆ. ನಕ್ಷೆ ಮಂಜೂರು ಮಾಡಿದ ಇಲಾಖೆ / ಸಂಸ್ಥೆಯು ಜವಾಬ್ದಾರರಾಗಿರುವುದಿಲ್ಲ.

Next Page...

ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
15/10 ಬೆಂಗಳೂರು.

19) ಅಭಿವೃದ್ಧಿದಾರರು ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲಿಕತ್ವದ ಬಗ್ಗೆ ಯಾವುದೇ ತಪ್ಪು ಮಾಹಿತಿ / ದಾಖಲಾತಿ ನೀಡಿದ್ದಲ್ಲಿ ಅರ್ಜಿದಾರರಿಗೆ ಯಾವುದೇ ಮುನ್ಸೂಚನೆ ನೀಡದೆ ನಕ್ಷೆ ಅನುಮೋದನೆಯನ್ನು ರದ್ದುಗೊಳಿಸಲಾಗುವುದು.

20) ಅಭಿವೃದ್ಧಿದಾರರು ಕುಡಿಯುವ ನೀರಿನ ಸರಬರಾಜಿಗಾಗಿ ಸಂಬಂಧಪಟ್ಟ ಇಲಾಖೆಯನ್ನು (BWSSB) ಅಥವಾ ಸ್ಥಳೀಯ ಸಂಸ್ಥೆಯನ್ನು ಅವಲಂಭಿಸದೆ ಸ್ವಂತ ವ್ಯವಸ್ಥೆಯನ್ನು ಮಾಡಿಕೊಳ್ಳತಕ್ಕದ್ದು.

21) SEIAA ನಿಯಮಗಳನ್ವಯ ಅಭಿವೃದ್ಧಿದಾರರು ವಾಹನ ನಿಲುಗಡೆಯ ಸ್ಥಳದಲ್ಲಿ ಕಡ್ಡಾಯವಾಗಿ ವಿದ್ಯುತ್ ವಾಹನಗಳಿಗೆ ಚಾರ್ಜಿಂಗ್ ಪಾಯಿಂಟ್ ಗಳನ್ನು ಅಳವಡಿಸತಕ್ಕದ್ದು.

22) FAR ವಿಸ್ತೀರ್ಣದ ಪ್ರತಿ 240 ಮೀ ಗೆ ಒಂದರಂತೆ ಗಿಡವನ್ನು ನೆಟ್ಟು ಪೋಷಿಸುವುದು ಕಡ್ಡಾಯವಾಗಿದೆ.

23) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಅಥವಾ ಯಾವುದೇ ಸಕ್ಷಮ ಪ್ರಾಧಿಕಾರಗಳು ಪ್ರಸ್ತಾಪಿಸಿರುವ ರಸ್ತೆಗಳ ಪಂಕ್ತೀಕರಣಗಳ ಪ್ರಶ್ನಿತ ಜಮೀನುಗಳಲ್ಲಿ ಇದ್ದಲ್ಲಿ ಸಾರ್ವಜನಿಕ ರಸ್ತೆಗಾಗಿ ಜಾಗವನ್ನು ಮುಫತ್ತಾಗಿ ನೊಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಹಸ್ತಾಂತರಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

24) ಸದರಿ ಕಟ್ಟಡವನ್ನು ಪ್ರಾರಂಭಿಸುವ ಮೊದಲು ಪ್ರಾರಂಭಿಕ ಪ್ರಮಾಣ ಪತ್ರವನ್ನು ಹಾಗೂ ಪೂರ್ಣಗೊಂಡ ಕಟ್ಟಡವನ್ನು ಉಪಯೋಗಿಸುವ ಮೊದಲು ಪ್ರಾಧಿಕಾರದಿಂದ ಸ್ವಾಧೀನಾನುಭವ ಪತ್ರವನ್ನು ಕಡ್ಡಾಯವಾಗಿ ಪಡೆಯತಕ್ಕದ್ದು.

25) ಅರ್ಜಿದಾರರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು / ಸರ್ಕಾರವು / ನ್ಯಾಯಾಲಯವು ಕಾಲ ಕಾಲಕ್ಕೆ ವಿಧಿಸುವ ಎಲ್ಲಾ ನಿಬಂಧನೆಗಳಿಗೆ ಬದ್ಧರಾಗಿರತಕ್ಕದ್ದು.

ಆಯುಕ್ತರ ಪರವಾಗಿ
ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
ಬೆಂಗಳೂರು.

ಪ್ರತಿಯನ್ನು: ಕಾರ್ಯಪಾಲಕ ಅಭಿಯಂತರು (DSKL), ಬೆಂ.ಅ.ಪ್ರಾ, ಬೆಂಗಳೂರು ರವರ ಮಾಹಿತಿಗಾಗಿ ಹಾಗೂ ಅನುಮೋದಿತ ನಕ್ಷೆಯಂತೆ ಕಾಮಗಾರಿ ನಡೆಸುತ್ತಿರುವ ಸಮಯದಲ್ಲಿ (Setback) ಉಲ್ಲಂಘನೆಗೆ ಅವಕಾಶ ನೀಡದಂತೆ ಪರಿಶೀಲಿಸಿಕೊಳ್ಳಲು ಹಾಗೂ ಮಾನ್ಯ ಸರ್ವೋಚ್ಛ ನ್ಯಾಯಾಲಯದ WP (Civil) No: 14664/2024 ದಿನಾಂಕ: 17.12.2024 ರಲ್ಲಿ ನೀಡಿರುವ ನಿರ್ದೇಶನಗಳನ್ನು ಪಾಲಿಸುವುದು.

Housiey.com